# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 185 | Pages. 2 | Date: 31-05-2025, SATURDAY | RNI NO: KARKAN/2024/89601

ಸಂಪುಟ : 01 - ಸಂಚಿಕೆ : 185 - ಪುಟಗಳು : 2 - 31 ಮೇ 2025 ಶನಿವಾರ | Ph: 8762954248 | ದರ : ₹1


# ಪೌರ ಕಾರ್ಮಿಕರಿಗೆ ಜನಪ್ರತಿನಿಧಿಗಳ ಬೆಂಬಲ

## ಮನವಿ ಆಲಿಸಿದ ರಾಜಕಾರಣಿಗಳು । ಮುಂದುವರೆದ ಮುಷ್ಕರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯಾದ್ಯಂತ ಕಳೆದ ನಾಲ್ಕು ದಿನಗಳಿಂದ ನಡೆಯುತ್ತಿರುವ ಪೌರಕಾರ್ಮಿಕರ ಅನಿರ್ದಿಷ್ಟ ಪ್ರತಿಭಟನೆ ಜಿಲ್ಲೆಯಲ್ಲೂ ಮುಂದುವರೆದಿದ್ದು ಪೌರ ಕಾರ್ಮಿಕರು ಕೆಲಸ ಬಹಿಷ್ಕರಿಸಿರುವುದರಿಂದ ಬಡಾವಣೆಗಳಲ್ಲೆ ಗಬ್ಬು ನಾರುತ್ತಿವೆ. ಮತ್ತೊಂದೆಡೆ ರಾಜಕೀಯ ಪಕ್ಷಗಳ ನಾಯಕರು ಶುಕ್ರವಾರ ಸರಣಿಯೋಪಾದಿಯಲ್ಲಿ ಪೌರ ಕಾರ್ಮಿಕರ ಬಳಿಗೆ ದೌಡಾಯಿಸಿ ಜೊತೆಗಿರುವ ಭರವಸೆಯನ್ನು ನೀಡಿದ್ದಾರೆ.

ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಪಿ. ಸ್ವರೂಪ್, ಹಾಗೂ ಮಾಜಿ ಶಾಸಕ ಪ್ರೀತಂ ಜೆ.ಗೌಡ ಹಾಗೂ ಹೊಳೆನರಸೀಪುರದಲ್ಲಿ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಧರಣಿ ನಿರತರ ಮನವಿ ಆಲಿಸಿ, ಬೆಂಬಲ ವ್ಯಕ್ತಪಡಿಸಿದ್ದಾರೆ.

ಹಾಸನ ಮಹಾನಗರ ಪಾಲಿಕೆ ಎದುರು ನಡೆಯುತ್ತಿರುವ ಮುಷ್ಕರ ಸ್ಥಳಕ್ಕೆ ಭೇಟಿ ನೀಡಿದ ಶ್ರೇಯಸ್ ಮಾತನಾಡಿ, ಸ್ವಚ್ಛತೆ ಕಾಪಾಡುವಲ್ಲಿ ಮಹತ್ತರ ಕೊಡುಗೆ ನೀಡುವ ಪೌರ ಕಾರ್ಮಿಕರ ಸೇವೆಯನ್ನು ನಮ್ಮ ಸರ್ಕಾರ ಯಾವಾಗಲೂ ಗೌರವಿಸುತ್ತದೆ. ಬೇಡಿಕೆ ಈಡೇರಿಸಲು ಸರ್ಕಾರ ಬದ್ಧವಾಗಿದೆ ಎಂದರು.

ಹಾಸನ ನಗರಪಾಲಿಕೆಗೆ ಹೆಚ್ಚುವರಿ ಸಿಬ್ಬಂದಿ ನೇಮಕ, ನೂತನ ಕಟ್ಟಡ ನಿರ್ಮಾಣ ಸೇರಿದಂತೆ ವಿವಿಧ ವಿಷಯಗಳ ಕುರಿತು ಅಧಿಕಾರಿಗಳೊಂದಿಗೆ ಸಂಸದರು ಚರ್ಚಿಸಿದರು.

ಇದಕ್ಕೂ ಮುನ್ನ ಶಾಸಕ ಸ್ವರೂಪ್ ಭೇಟಿ ನೀಡಿ, ನಿಮ್ಮ ಬೇಡಿಕೆ ಬಗ್ಗೆ ಸದನದಲ್ಲಿ ಚರ್ಚೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ನಂತರ ಪ್ರೀತಂಗೌಡ, ಪೌರಕಾರ್ಮಿಕರ ಸಮಸ್ಯೆಗಳನ್ನು ಆಲಿಸಿದರು. ಪ್ರತಿಭಟನೆಗೆ ಬೆಂಬಲ ಘೋಷಿಸಿ ಸ್ಥಳದಿಂದಲೇ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ವಿಪಕ್ಷ ನಾಯಕ ಆರ್.ಅಶೋಕ್ ಅವರಿಗೆ ಕರೆ ಮಾಡಿದರು.

ಈ ವೇಳೆ ಪ್ರತಿಭಟನಾಕಾರರ ಜೊತೆ ವಿಜಯೇಂದ್ರ ಮಾತನಾಡಿ, ಮುಂದಿನ ಅಧಿವೇಶನದಲ್ಲಿ ಪೌರ ಕಾರ್ಮಿಕರ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನ ಸೆಳೆಯುವುದಾಗಿ ಭರವಸೆ ನೀಡಿದರು.

ಈ ವೇಳೆ ಮಹಾನಗರಪಾಲಿಕೆ ಅಧ್ಯಕ್ಷ ಎಂ.ಚಂದ್ರೇಗೌಡ, ನಗರಸಭೆ ಮಾಜಿ ಅಧ್ಯಕ್ಷ ಆರ್.ಮೋಹನ್ ಮೊದಲಾದವರಿದ್ದರು.

ಹೊಳೆನರಸೀಪುರ ವರದಿ: ಪಟ್ಟಣದ ಪುರಸಭೆ ಎದುರು ಮೇ 27 ರಿಂದ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ವತಿಯಿಂದ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಕರ್ತವ್ಯ ಬಹಿಷ್ಕರಿಸಿ ಅನಿರ್ದಿಷ್ಟ ಮುಷ್ಕರ ನಡೆಸುತ್ತಿರುವ ಪೌರ ಕಾರ್ಮಿಕರ ಧರಣಿ ಸ್ಥಳಕ್ಕೆ ಭೇಟಿ ನೀಡಿದ ರೇವಣ್ಣ, ಅಹವಾಲು ಸ್ವೀಕರಿಸಿ, ನಿಮ್ಮ ಬೇಡಿಕೆ ಈಡೇರಿಸಲು ಸರ್ಕಾರದ ಮೇಲೆ ಒತ್ತಡ ಹೇರುವೆ ಎಂದರು.

ಇದೇ ವೇಳೆ ಇನ್ನಾದರೂ ಸರ್ಕಾರ ತಕ್ಷಣವೇ ಬೇಡಿಕೆ ಈಡೇರಿಸದಿದ್ದರೆ ಶನಿವಾರದಿಂದ ಉಪವಾಸ ಸತ್ಯಾಗ್ರಹ ಆರಂಭಿಸುವುದಾಗಿ ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.



### ಗಬ್ಬು ನಾರುತ್ತಿವೆ ಬಡಾವಣೆಗಳು

ರಾಜ್ಯ ಪೌರ ನೌಕರರ ಸಂಘದಿಂದ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸ್ಥಳೀಯ ಸಂಸ್ಥೆ ಪೌರ ಕಾರ್ಮಿಕರು ಕೆಲಸ ಸ್ಥಗಿತಗೊಳಿಸಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸುತ್ತಿರುವುದರಿಂದ ನಗರದಲ್ಲಿ ಅಸ್ವಚ್ಛತೆ ತಾಂಡವವಾಡುತ್ತಿದ್ದು ಬಡಾವಣೆಗಳು ಗಬ್ಬು ನಾರುತ್ತಿವೆ.

ಪ್ರತಿದಿನ ಬೆಳಿಗ್ಗೆ ಬರುತ್ತಿದ್ದ ಕಸ ಸಂಗ್ರಹ ಆಟೋಗಳು ನಾಲ್ಕು ದಿನಗಳಿಂದ ನಿಂತಲ್ಲೇ ನಿಂತಿವೆ. ಹೀಗಾಗಿ ಸಾರ್ವಜನಿಕರು ತ್ಯಾಜ್ಯವನ್ನು ರಸ್ತೆಗೆ ಎಸೆಯುತ್ತಿದ್ದಾರೆ. ಪ್ರಮುಖ ರಸ್ತೆ, ಬಡಾವಣೆಗಳಲ್ಲಿ ಕಸದ ರಾಶಿ ತಾಂಡವವಾಡುತ್ತಿರುವುದು ಮಾತ್ರವಲ್ಲದೆ ಸಾಂಕ್ರಾಮಿಕ ಕಾಯಿಲೆ ಹರಡುವ ಭೀತಿಯೂ ಎದುರಾಗಿದೆ.

ನಗರದ 35 ವಾರ್ಡ್‌ಗಳಲ್ಲೂ ತ್ಯಾಜ್ಯ ವಿಲೇವಾರಿ ಸ್ಥಗಿತಗೊಂಡಿರುವುದರಿಂದ ನಗರದ ಸೌಂದರ್ಯಕ್ಕೆ ಧಕ್ಕೆಯುಂಟಾಗಿದೆ. ಸಾರ್ವಜನಿಕರು ರಸ್ತೆಯಲ್ಲಿ ನಡೆದಾಡಬೇಕೆಂದರೆ ಮೂಗು ಮುಚ್ಚಿಕೊಳ್ಳಬೇಕಾದ ಪರಿಸ್ಥಿತಿ ಇದೆ. ಸಂಗ್ರಹವಾಗುವ ತ್ಯಾಜ್ಯವನ್ನು ಮನೆಯಲ್ಲಿಟ್ಟುಕೊಳ್ಳಲು ಆಗದ ಹಿನ್ನಲೆಯಲ್ಲಿ ಜನರು ನೇರವಾಗಿ ರಸ್ತೆಗೆ ಎಸೆಯುತ್ತಿದ್ದಾರೆ.

### ಪೌರ ಕಾರ್ಮಿಕರ ಬೇಡಿಕೆ ಏನು


ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿಗಳ ಪೌರ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸಬೇಕು. ನಗದು ರಹಿತ ಆರೋಗ್ಯ ಚಿಕಿತ್ಸಾ ಸೌಲಭ್ಯ ಯೋಜನೆಯಾದ ಜ್ಯೋತಿ ಸಂಜೀವಿನಿಯನ್ನು ಪೌರ ನೌಕರರಿಗೂ ವಿಸ್ತರಿಸಬೇಕು. ಹೊರಗುತ್ತಿಗೆ ನೌಕರರನ್ನು ನೇರ ಪಾವತಿಗೆ ಒಳಪಡಿಸಬೇಕು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕಳೆದ ನಾಲ್ಕು ದಿನಗಳಿಂದ ಕೆಲಸ ಬಹಿಷ್ಕರಿಸಲಾಗಿದೆ. ಸರ್ಕಾರ ತಮ್ಮ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸುವ ವರೆಗೆ ಮುಷ್ಕರ ವಾಪಾಸ್ ಪಡೆಯುವುದಿಲ್ಲ ಎಂದು ಪಟ್ಟು ಹಿಡಿದಿರುವುದರಿಂದ ನಗರದ ನೋಟ ಮತ್ತಷ್ಟು ಅಧ್ವಾನವಾಗಲಿದೆ.



### ಸಾಂಕ್ರಾಮಿಕ ಕಾಯಿಲೆ ಭೀತಿ

ಸಮರ್ಪಕವಾಗಿ ಕಸ ವಿಲೇವಾರಿಯಾಗದೆ ಎಲ್ಲೆಂದರಲ್ಲಿ ಬಿದ್ದಿರುವುದರಿಂದ ಸೊಳ್ಳೆ, ಕ್ರಿಮಿಕೀಟಗಳು ಹೆಚ್ಚಾಗಿ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವ ಆತಂಕ ಎದುರಾಗಿದೆ. ನಗರ ಸೇರಿದಂತೆ ಜಿಲ್ಲಾದ್ಯಂತ ಮಳೆ ಸುರಿಯುತ್ತಿರುವುದರಿಂದ ಸಾಂಕ್ರಾಮಿಕ ಕಾಯಿಲೆ ಭೀತಿ ಎದುರಾಗಿದೆ. ಡೆಂಗ್ಯೂ ಪ್ರಕರಣಗಳು ವರದಿಯಾಗುತ್ತಿದ್ದು ಸ್ವಚ್ಛತೆ ಕಾಪಾಡಿಕೊಳ್ಳದಿದ್ದರೆ ಪರಿಸ್ಥಿತಿ ಮತ್ತಷ್ಟು ಹದಗೆಡಲಿದೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.

# ಸಚಿವರಿಗೆ ಹದಗೆಟ್ಟ ರಸ್ತೆ ದರ್ಶನ ಮಾಡಿಸಿದ ಶಾಸಕ ಸಿಮೆಂಟ್ ಮಂಜು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಹಲವಾರು ವರ್ಷಗಳಿಂದ ಹದಗೆಟ್ಟಿರುವ ರಸ್ತೆಯನ್ನು ವೀಕ್ಷಿಸುವಂತೆ ಲೋಕೋಪಯೋಗಿ ಇಲಾಖೆ ಸಚಿವರನ್ನು ಶಾಸಕ ಸಿಮೆಂಟ್ ಮಂಜು ಸ್ಥಳಕ್ಕೆ ಕರೆತಂದ ಘಟನೆ ನಡೆಯಿತು.

ಗುರುವಾರ ತಾಲ್ಲೂಕಿನ ವಿವಿಧ ಭಾಗಗಳಲ್ಲಿ ಮಳೆಯಿಂದ ಹಾನಿಗೊಳದ ಪ್ರದೇಶಗಳಿಗೆ ಭೇಟಿ ನೀಡಲು ಆಗಮಿಸಿದ್ದ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಹದಗೆಟ್ಟಿರುವ ರಸ್ತೆಗಳಿಗೆ ಅನುದಾನ ನೀಡುವಂತೆ ಮನವಿ ಮಾಡಿದರು.

ತಾಲ್ಲೂಕಿನ ಬಾಳ್ಳುಪೇಟೆಯಿಂದ ರಾಜೇಂದ್ರ ಪುರ, ಚಿನ್ನಹಳ್ಳಿ ಮಾರ್ಗವಾಗಿ ಮಗ್ಗೆ ಸಂಪರ್ಕಿಸುವ ರಸ್ತೆ ತೀರ ಹಾಳಾಗಿದ್ದು ವಾಹಗಳ ಸಂಚಾರ ದುಸ್ತರವಾಗಿದೆ. ರಸ್ತೆಯು ಲೋಕೋಪಯೋಗಿ ರಸ್ತೆಯಾಗಿರುತ್ತದೆ. ಸದರಿ ರಸ್ತೆಯಲ್ಲಿ ಅತಿಯಾದ ವಾಹನ ಸಂಚಾರ ಮತ್ತು ಮಳೆಯಿಂದಾಗಿ ರಸ್ತೆಯು ಹಾಳಾಗಿದ್ದು, ಸುಗಮವಾಹನ ಸಂಚಾರಕ್ಕೆ ಅಡಚಣೆಯುಂಟಾಗುತ್ತದೆ. ಈ ರಸ್ತೆಯನ್ನು ದೈನಂದಿನ ಕಾರ್ಯಗಳಿಗಾಗಿ ರೈತರು, ವಿದ್ಯಾರ್ಥಿಗಳು, ವ್ಯಾಪಾರಿಗಳು ಮತ್ತು ಕೃಷಿಕರು ಬಳಸುತ್ತಾರೆ. ವಾಹನ ಸವಾರರಿಗೆ ಸುಗಮ ಸಂಚಾರ ಕಷ್ಟಕರವಾಗುತ್ತಿದೆ. ಸದರಿ ರಸ್ತೆಯನ್ನು ಅಭಿವೃದ್ಧಿಪಡಿಸಿ ವಾಹನ ಸಂಚಾರಕ್ಕೆ ಅನುವುಮಾಡಿಕೊಡುವುದು ಅತ್ಯವಶ್ಯಕವಾಗಿರುತ್ತದೆ. ಆದ್ದರಿಂದ ಅನುದಾನವನ್ನು ಬಿಡುಗಡೆಗೊಳಿಸಿ ಕಾಮಗಾರಿ ಅನುಷ್ಠಾನಗೊಳಿಸುವಂತೆ ಶಾಸಕ ಸಿಮೆಂಟ್ ಮಂಜು ಮನವಿ ಮಾಡಿದರು.



ಹಾಸನ: ಅಂತರಾಷ್ಟ್ರೀಯ ಬೂಕರ್ ಪ್ರಶಸ್ತಿಗೆ ಭಾಜನರಾದ ಹಿರಿಯ ಸಾಹಿತಿ ಬಾನು ಮುಷ್ತಾಕ್ ಅವರಿಗೆ ಸರ್ಕಾರದ ವತಿಯಿಂದ ಜೂ. 2 ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಅಭಿನಂದನಾ ಸಮಾರಂಭ ಏರ್ಪಡಿಸಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೈಸೂರು ವಿಭಾಗದ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನ ಅವರು ಶುಕ್ರವಾರ ಬಾನು ಮುಷ್ತಾಕ್ ಅವರ ಮನೆಗೆ ಭೇಟಿ ನೀಡಿ ಸಮಾರಂಭಕ್ಕೆ ಆಹ್ವಾನಿಸಿದರು. ಕನ್ನಡ ಮತ್ತು ಸಂಸ್ಕತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಹೆಚ್.ಪಿ. ತಾರಾನಾಥ್ ಇದ್ದರು.

# ಸರ್ಕಾರಿ ಶಾಲೆಗೆ ಮಕ್ಕಳನ್ನು ಸೇರಿಸಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ಕಾರಿ ಶಾಲೆಗಳು ಖಾಸಗಿ ಶಾಲೆಗಳಿಂತ ಉತ್ತಮವಾಗಿದ್ದು ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಬೇಕು ಎಂದು ಶಾಸಕ ಹೆಚ್.ಪಿ. ಸ್ವರೂಪ್ ಸಲಹೆ ನೀಡಿದರು.

ನಗರದ ವಾಣಿವಿಲಾಸ ಶಾಲೆಯಲ್ಲಿ ಶುಕ್ರವಾರ ಏರ್ಪಡಿಸಿದ್ದ ಶಾಲಾ ಪ್ರಾರಂಭೋತ್ಸವದಲ್ಲಿ ಮಾತನಾಡಿ, ಸರ್ಕಾರಿ ಶಾಲೆಗಳು ಯಾವುದೇ ಖಾಸಗಿ ಶಾಲೆಗಳಿಗಿಂತ ಕಡಿಮೆಯಿಲ್ಲ. ಶಿಕ್ಷಕರು ಮಕ್ಕಳ ದಾಖಲಾತಿಗಾಗಿ ಮನೆ ಮನೆಗೆ ಭೇಟಿ ನೀಡಿ ಸರ್ಕಾರಿ ಶಾಲೆಗಳ ಉಳುವಿಗೆ ಶ್ರಮ ವಹಿಸುತ್ತಿದ್ದಾರೆ ಎಂದು ತಿಳಿಸಿದರು.

ನಗರದ ಹೃದಯ ಭಾಗದಲ್ಲಿರುವ ಈ ಶಾಲೆ 125 ವರ್ಷ ಪೂರೈಸಿದೆ. ಈ ಹಳೆಯ ಶಾಲೆಯನ್ನು ಉಳಿಸುವ ಜವಾಬ್ದಾರಿ ಎಲ್ಲರ ಮೇಲಿದೆ. ಶಾಸಕರು ಶಾಲೆಗಳ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿಗಾಗಿ ಅನುದಾನ ಒದಗಿಸಲು ಸರ್ಕಾರಕ್ಕೆ ಮನವಿ ಮಾಡುವುದಾಗಿ ತಿಳಿಸಿದರು.

ಪೂರ್ವಜರು ಶಾಲೆಗಳಿಗೆ ದಾನವಾಗಿ ನೀಡಿರುವ ಜಾಗಗಳು ಅತ್ಯಂತ ಬೆಲೆ ಬಾಳುವುದರಿಂದ ಮೊಮ್ಮಕ್ಕಳು ಸದರಿ ಜಾಗಗಳನ್ನು ಮರುಪಡೆಯಲು ಪ್ರಯತ್ನಿಸುತ್ತಿದ್ದಾರೆ. ಶಾಲೆಗಳ ಹೆಸರಿಗೆ ಖಾತೆ ಮಾಡುವ ಮೂಲಕ ಆಸ್ತಿಯನ್ನು ಸಂರಕ್ಷಣೆ ಮಾಡಬೇಕು ಈ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ವಹಿಸುವಂತೆ ತಿಳಿಸಿದರು.

ಶಾಲಾ ಮಕ್ಕಳಿಗೆ ಗುಲಾಬಿ ಹೂ , ಶಾಲಾ ಸಮವಸ್ತ್ರ ಹಾಗೂ ಪಠ್ಯ ಪುಸ್ತಕಗಳನ್ನು ವಿತರಿಸಿ ಶುಭ ಹಾರೈಸಿದರು.

ಅಪರ ಜಿಲ್ಲಾಧಿಕಾರಿ ಕೆ.ಟಿ. ಶಾಂತಲಾ ಮಾತನಾಡಿ, ಮಕ್ಕಳು ಓದಿನ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ತೊಡಗಿಸಿಕೊಳ್ಳಿ ಎಂದ ಅವರು ಶಾಲಾ ಅವಧಿಯನ್ನು ಖುಷಿಯಿಂದ ಅನುಭವಿಸಿ ಎಂದು ತಿಳಿಸಿದರು.

ವಿದ್ಯಾವಂತರಾಗಿ, ಬುದ್ಧಿವಂತರಾಗಿ, ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳುವುದರ ಜೊತೆಗೆ ಉತ್ತಮ ನಾಗರಿಕರಾಗಿ ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಹೆಚ್.ಎಸ್. ಚಂದ್ರಶೇಖರ್ ಮಾತನಾಡಿ, ಸರ್ಕಾರದ ಆದೇಶದಂತೆ 2025-26ನೇ ಶೈಕ್ಷಣಿಕ ಸಾಲಿನ ಶಾಲಾ ಪ್ರಾರಂಭೋತ್ಸವವನ್ನು ಜಿಲ್ಲಾದ್ಯಂತ ಹಮ್ಮಿಕೊಳ್ಳಲಾಗಿದೆ ಎಂದರು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ, ಕ್ಷೇತ್ರ ಶಿಕ್ಷಣಾಧಿಕಾರಿ ಮಂಜುಳಾ, ಮಹೇಶ್, ಜಿಲ್ಲಾ ನೌಕರರ ಸಂಘದ ಪದಾಧಿಕಾರಿಗಳಾದ ರವೀಂದ್ರ, ಅಕ್ಷರ ದಾಸೋಹ ಅಧಿಕಾರಿ ಮಂಜು ನಾಯಕ್, ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷೆ ಮತ್ತಿತರರು ಉಪಸ್ಥಿತರಿದ್ದರು.

# ಜಿಲ್ಲೆಯ ಏಳು ಕ್ಷೇತ್ರಗಳಲ್ಲೂ ಬಿಜೆಪಿ ಗೆಲುವು ಖಚಿತ

## ಡಿಕೆಶಿ ಹೇಳಿಕೆಗೆ ಪ್ರೀತಂ ಟಕ್ಕರ್ । ಮಂಗಳೂರು ಘಟನೆಗೆ ಖಂಡನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಜಿಲ್ಲೆಯ ಏಳು ಕ್ಷೇತ್ರಗಳಲ್ಲೂ ಬಿಜೆಪಿ ಅಭ್ಯರ್ಥಿಗಳು ಜಯ ಗಳಿಸುತ್ತಾರೆ ಎಂದು ಮಾಜಿ ಶಾಸಕ ಪ್ರೀತಂ ಗೌಡ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿ, ಜಿಲ್ಲೆಯ ಏಳು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲ್ಲಲಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಅವರು ಕೆಪಿಸಿಸಿ ಅಧ್ಯಕ್ಷರೂ ಆಗಿದ್ದಾರೆ. ಎಲ್ಲ ಪಕ್ಷಗಳ ನಾಯಕರು ಹೀಗೆ ಹೇಳೋದು ಸಹಜ, ನಾವೂ ಹೇಳುತ್ತೇವೆ, ಜನತಾದಳದವರೂ ಹೇಳುತ್ತಾರೆ, ಆದರೆ ಚುನಾವಣೆ ಸಂದರ್ಭದಲ್ಲಿ ಜನರ ವಿಶ್ವಾಸ ಯಾರಿಗೆ ಇರುತ್ತೋ ಅವರು ಗೆಲ್ಲುತ್ತಾರೆ ಎಂದರು.

ಮುಂದಿನ ಚುನಾವಣೆಯಲ್ಲಿ ಬಿಜೆಪಿ ಏಳೂ ಸ್ಥಾನ ಗೆಲ್ಲಲಿದೆ. ಹಾಗೆಯೇ ರಾಜ್ಯದಲ್ಲಿ 150ಕ್ಕೂ ಹೆಚ್ಚು ಸ್ಥಾನಗಳಲ್ಲಿ ಜಯಭೇರಿ ಬಾರಿಸಲಿದೆ ಎಂದು ಪ್ರೀತಂ ವಿಶ್ವಾಸ ವ್ಯಕ್ತಪಡಿಸಿದರು. 136 ಸ್ಥಾನ ಗೆದ್ದಾಗಲೇ ಹಾಸನದಲ್ಲಿ ಕಾಂಗ್ರೆಸ್ ಗೆದ್ದಿದ್ದು 1 ಸ್ಥಾನ ಎಂದು ಟಾಂಗ್ ನೀಡಿದರು.



> ಜಿಲ್ಲೆಯಲ್ಲಿ ಜಿಪಂ-ತಾಪಂ ಚುನಾವಣೆಯಲ್ಲೂ ಬಿಜೆಪಿ-ಜೆಡಿಎಸ್ ನಡುವಿನ ಮೈತ್ರಿ ಮುಂದುವರಿಕೆ ಕುರಿತು ವರಿಷ್ಠರು ನಿರ್ಧರಿಸುತ್ತಾರೆ. ರಾಜ್ಯ ನಾಯಕರ ತೀರ್ಮಾನದಂತೆ ಎಲ್ಲವೂ ಆಗಲಿದೆ.
>
> **- ಪ್ರೀತಂ ಗೌಡ, ಮಾಜಿ ಶಾಸಕ**

ಮಂಗಳೂರಲ್ಲಿ ಅಥವಾ ಬೇರೆ ಎಲ್ಲೇ ಆಗಲೀ ಕೋಮುದ್ವೇಷ ಬಿತ್ತಿ ಅಶಾಂತಿ ನಿರ್ಮಾಣ ಮಾಡುವುದು ಅಕ್ಷಮ್ಯ ಅಪರಾಧ. ಇದು ಯಾರಿಗೂ ಶೋಭೆ ತರುವುದಿಲ್ಲ ಎಂದು ಹೇಳಿದರು.

ಈ ರೀತಿಯ ಆಡಳಿತದಿಂದ ಯಾರೇ ಬಲಿಯಾದರೂ ಅಮೂಲ್ಯ ಜೀವಕ್ಕೆ ಬೆಲೆ ಕಟ್ಟಲು ಆಗಲ್ಲ. ಆಡಳಿತ ನಡೆಸುವ ಸರ್ಕಾರ ಗಂಭೀರವಾಗಿ ನಡೆದುಕೊಳ್ಳಬೇಕು. ಕಾನೂನು ಸುವ್ಯವಸ್ಥೆ ಹತೋಟಿಗೆ ತರಬೇಕು ಎಂದರೆ ಎಲ್ಲರೂ ಜವಾಬ್ದಾರಿಯಿಂದ ಮಾತನಾಡಬೇಕು ಎಂದರು.

### ಸಾವಿನಲ್ಲಿ ರಾಜಕೀಯ ಬೇಡ

ಕರಾವಳಿ ಭಾಗದಲ್ಲಿ ಕೋಮುದ್ವೇಷ ಹೆಚ್ಚಾಗಲು ಬಿಜೆಪಿ ಕಾರಣ ಎಂಬ ಸಚಿವ ದಿನೇಶ್ ಗುಂಡೂರಾವ್ ಅವರ ಆರೋಪಕ್ಕೆ, ಸಾವಿನ ವಿಷಯದಲ್ಲಿ ರಾಜಕೀಯ ಮಾಡುವುದು ಬೇಡ ಎಂದು ಕುಟುಕಿದರು. ಕಾನೂನನ್ನು ಬಿಗಿ ಪಡಿಸಿ ಯಾರು ತಪ್ಪು ಮಾಡುತ್ತಾರೋ ಅವರನ್ನು ಕಠಿಣವಾಗಿ ದಂಡಿಸಬೇಕು. ಓಲೈಕೆ ರಾಜಕಾರಣ ಮಾಡುವುದನ್ನು ನಿಲ್ಲಿಸಬೇಕು. ಎಲ್ಲ ಧರ್ಮದವರ ಪ್ರಾಣಕ್ಕೂ ಬೆಲೆ ಇದೆ ಎಂಬುದನ್ನು ಮನಗಾಣಬೇಕು ಎಂದರು. ಕಾನೂನು ಮೀರಿದರೆ ಹೀಗೆ: ಹುಬ್ಬಳ್ಳಿ ಗಲಭೆ ಕೇಸ್‌ಗಳನ್ನು ಸರ್ಕಾರ ವಾಪಸ್ ಪಡೆದಿದ್ದನ್ನು ರದ್ದು ಮಾಡಿರುವ ಹೈಕೋರ್ಟ್ ಆದೇಶ ಬಗ್ಗೆ ಪ್ರತಿಕ್ರಿಯಿಸಿ, ಸರ್ಕಾರ ನಡೆಸುವವರು ನಾವೇ ಸಾರ್ವಭೌಮರು ಅಂದುಕೊಳ್ಳಲು ಕಾನೂನಿನಲ್ಲಿ ಅವಕಾಶ ಇಲ್ಲ. ಕಾನೂನಿನಲ್ಲಿ ಅವಕಾಶ ಇಲ್ಲದೇ ಇರುವುದನ್ನು ಮಾಡಿದರೆ ಏನಾಗಲಿದೆ ಎಂಬುದಕ್ಕೆ ಹೈ ತೀರ್ಪು ಉದಾಹರಣೆ ಎಂದರು. ಈ ರೀತಿಯ ತೀರ್ಮಾನ ಕೈಗೊಳ್ಳುವ ಮುನ್ನ 10 ಬಾರಿ ಯೋಚಿಸಬೇಕು ಎಂದರು. ಸರ್ಕಾರದ ಇದೇ ರೀತಿಯ ಯಡವಟ್ಟುಗಳಿಂದ ಮಂಗಳೂರಿನಲ್ಲಿ ಒಂದಲ್ಲ ಒಂದು ರೀತಿಯ ಸಮಸ್ಯೆ ಆಗುತ್ತಿದೆ ಎಂದು ಉದಾಹರಿಸಿದರು. ಕೋಮುದಳ್ಳುರಿ ಬಿತ್ತುವ, ಅಶಾಂತಿ ಸೃಷ್ಟಿಸಿ ಕಾನೂನಿಗೆ ವಿರುದ್ಧವಾಗಿ ನಡೆದುಕೊಳ್ಳುವವರ ಮೇಲಿನ ಕೇಸ್ ವಾಪಸ್ ಪಡೆಯುವುದು ಸರಿಯಲ್ಲ ಎಂದರು.


ಹಿಂದೆಯೇ ಆಗಬೇಕಿತ್ತು: ಬಿಜೆಪಿಯಿಂದ ಮಾಜಿ ಸಚಿವರು, ಹಾಲಿ ಶಾಸಕರಾದ ಎಸ್.ಟಿ.ಸೋಮಶೇಖರ್ ಹಾಗೂ ಶಿವರಾಂ ಹೆಬ್ಬಾರ್ ಅವರನ್ನು ಉಚ್ಚಾಟನೆ ಹಿಂದೆಯೇ ಆಗಬೇಕಿತ್ತು. ಇದು ಕಾರ್ಯಕರ್ತರ ಆಶಯವೂ ಆಗಿತ್ತು. ಅವರ ನಡವಳಿಕೆ ಅದನ್ನು ತೋರಿಸಿಕೊಡುತ್ತಿತ್ತು. ಅಂತಿಮವಾಗಿ ಪಕ್ಷ ತೀರ್ಮಾನ ಕೈಗೊಂಡಿದೆ. ಯಾರೇ ಆಗಲಿ, ಪಕ್ಷದ ವಿರೋಧಿ ಚಟುವಟಿಕೆ ನಡೆಸಿದರೆ ಇದೇ ಶಿಕ್ಷೆಯಾಗುತ್ತದೆ ಎಂಬುದನ್ನು ಕೇಂದ್ರ ನಾಯಕರು ತೋರಿಸಿಕೊಟ್ಟಿದ್ದಾರೆ. ಈ ಮೂಲಕ ಪಕ್ಷಕ್ಕಿಂತ ಯಾರೂ ದೊಡ್ಡವರಲ್ಲ ಎಂಬುದು ಮತ್ತೊಮ್ಮೆ ಸಾಬೀತಾಗಿದೆ ಎಂದರು.

# ವಳಲಹಳ್ಳಿ ಗ್ರಾ.ಪಂ.ನಲ್ಲಿ ಬೆಳೆಗಾರರ ಸಂಘದ ಮಾಸಿಕ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲ್ಲೂಕಿನ ಹೆತ್ತೂರು ಹೋಬಳಿಯ ವಳಲಹಳ್ಳಿ ಗ್ರಾಮ ಪಂಚಾಯಿತಿ ಬೆಳೆಗಾರರ ಸಂಘದ 6ನೇ ಮಾಸಿಕ ಸಭೆ ಅಧ್ಯಕ್ಷ ಎಂ.ಕೆ. ದರ್ಶನ್ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆಯಿತು.

ಭಾರತೀಯ ಕಾಫಿ ಬೋರ್ಡ್ ಅಧ್ಯಕ್ಷ ಎಂ.ಜೆ. ದಿನೇಶ್ ಮಾತನಾಡಿ, ಭಾರತೀಯ ಕಾಫಿಯ ಉತ್ತಮ ಗುಣಮಟ್ಟದಿಂದಾಗಿ ಪ್ರಪಂಚದಾದ್ಯಂತ ಬೇಡಿಕೆ ಬಂದಿದೆ. ಜಾಗತಿಕ ವಿದ್ಯಮಾನದಲ್ಲಿ ಕಾಫಿಯ ದರದಲ್ಲಿ ಏರಿಳಿತವಾದರೆ ಬೆಳೆಗಾರರು ಧೃತಿಗೆಡದೆ ಉತ್ತಮ ರೀತಿಯ ಕಾಫಿಯನ್ನು ಹೆಚ್ಚು ಬೆಳೆಯಲು ವೈಜ್ಞಾನಿಕ ಕ್ರಮ ಅನುಸರಿಸಬೇಕು. ಇದರಿಂದ ದರದಲ್ಲಿ ಏರಿಳಿತವಾದರೂ ಕೂಡ ಲಾಭದಲ್ಲಿ ಬೆಳೆಗಾರ ಇರುವಂತಾಗುತ್ತದೆ. ಈ ನಿಟ್ಟಿನಲ್ಲಿ ಬೆಳೆಗಾರರ ಚಿಂತನೆಗಳು ಪರಿವರ್ತನೆಯಾಗಬೇಕು ಎಂದರು.



ಕಾಫಿ ಬೋರ್ಡ್ ಜಂಟಿ ನಿರ್ದೇಶಕ ನವೀನ್ ಕುಮಾರ್ ಮಾತನಾಡಿ, ಕಾಫಿ ಬೆಳೆಯಲ್ಲಿ ಉತ್ತಮ ಫಲಿತಾಂಶ ತೆಗೆಯಲು ವೈಜ್ಞಾನಿಕ ಕ್ರಮಗಳನ್ನು ಅನುಸರಿಸಬೇಕು. ಮಣ್ಣು ಪರೀಕ್ಷೆಗಳನ್ನು ಮಾಡಿಸುವ ಮೂಲಕ ಅಧಿಕ ಹೆಚ್ಚು ಇಳುವರಿ ತೆಗೆಯುವಂತಾಗುತ್ತದೆ. ಜೊತೆಗೆ ಈ ಭಾಗದ ಪರಿಸರಕ್ಕೆ ಹೊಂದಿಕೊಳ್ಳುವಂತಹ ಕಾಫಿ ತಳಿಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಇದರ ಪ್ರಯೋಜನಗಳನ್ನು ಕೂಡ ಬೆಳೆಗಾರರು ಪಡೆದುಕೊಳ್ಳಬೇಕು ಎಂದು ಹೇಳಿದರು.

ವಳಲಹಳ್ಳಿ ಬೆಳೆಗಾರರ ಸಂಘದ ಅಧ್ಯಕ್ಷ ದರ್ಶನ್ ಮರ್ಜನಹಳ್ಳಿ ಮಾತನಾಡಿ, ಪ್ರತಿ ಮಾಸಿಕ ಸಭೆಯಲ್ಲಿ ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಕರೆಸಿ ಅವರಿಂದ ಮಾಹಿತಿ ಕೊಡುವ ಕೆಲಸವನ್ನು ಮಾಡುತ್ತಿದ್ದೇವೆ. ಎಸ್‌ಎಸ್‌ಎಲ್‌ಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಬೆಳೆಗಾರರ ಮಕ್ಕಳಿಗೆ ಹಾಗೂ ಕರಡಿಗಾಲ ಗ್ರಾಮದ ಮಾಜಿ ಸೈನಿಕರ ಇಬ್ಬರು ಮಕ್ಕಳು ಪಾಕಿಸ್ತಾನದ ಖಜಕಿಸ್ತಾನದಲ್ಲಿ ಕರಾಟೆ ವಿಭಾಗದ ಪ್ರಶಸ್ತಿ ಪಡೆದಿದ್ದವರಿಗೆ ವಿಶೇಷವಾಗಿ ಸನ್ಮಾನ ಮಾಡಲಾಗಿದೆ ಎಂದರು.

ಗ್ರಾಮ ಪಂಚಾಯಿತಿ ಬೆಳೆಗಾರರ ಸಂಘದ ಎಲ್ಲಾ ನಿರ್ದೇಶಕರು ಹಾಗೂ ಪದಾಧಿಕಾರಿಗಳು ಹಾಜರಿದ್ದರು.

# ಟೈಮ್ಸ್ ಶಾಲೆಯಲ್ಲಿ ಮಕ್ಕಳಿಗೆ ಪ್ರೀತಿಯ ಸ್ವಾಗತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪ್ರಸಕ್ತ ಶೈಕ್ಷಣಿಕ ಸಾಲಿನ ಶಾಲೆಯ ತರಗತಿಗಳು ಇಂದಿನಿಂದ ಆರಂಭವಾಗಿದ್ದು, ಶಾಲೆಗೆ ಸೇರಿರುವ ಎಲ್ಲಾ ಮಕ್ಕಳನ್ನು ಆತ್ಮೀಯವಾಗಿ ಬರ ಮಾಡಿಕೊಳ್ಳಲಾಗಿದೆ ಎಂದು ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ. ಟೈಮ್ಸ್ ಗಂಗಾಧರ್ ತಿಳಿಸಿದ್ದಾರೆ.

ನಗರದ ವಿಜಯನಗರ ಬಡಾವಣೆಯಲ್ಲಿರುವ ಟೈಮ್ಸ್ ಅಂತರಾಷ್ಟ್ರೀಯ ಶಾಲೆಯಲ್ಲಿ ಶುಕ್ರವಾರ ನಡೆದ 2025-26ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವದಲ್ಲಿ ಮಕ್ಕಳನ್ನು ಶಾಲೆಗೆ ಆಹ್ವಾನಿಸಿ ಮಾತನಾಡಿದ ಅವರು, ಬೇಸಿಗೆ ರಜೆ ಮುಗಿಸಿ ಮೊದಲ ಶಾಲಾ ದಿನದಂದು ನಗುಮೊಗದಿಂದ ಬಂದ ಚಿಣ್ಣರನ್ನು ಶಾಲೆಯ ಎಲ್ಲಾ ಸಿಬ್ಬಂದಿ ಆತ್ಮೀಯವಾಗಿ ಸ್ವಾಗತಿಸಲಾಗಿದೆ. ಶಾಲಾ ಆರಂಭದ ಮೊದಲ ದಿನದ ಅಂಗವಾಗಿ ಪ್ರಾರಂಭದಲ್ಲಿ ಶಾಲಾ ಪ್ರಾಂಶುಪಾಲರು ವಿದ್ಯಾ ದೇವತೆಗೆ ಪೂಜೆ ಸಲ್ಲಿಸಿದರು. ಮಕ್ಕಳು ಹಾಗೂ ಶಾಲಾ ಸಿಬ್ಬಂದಿ ವರ್ಗದವರನ್ನು ಹೂಗುಚ್ಛ ನೀಡಿ, ನಂತರ ಎಲ್ಲಾ ವಿದ್ಯಾರ್ಥಿಗಳನ್ನು ಆರತಿ ಮಾಡಿ ತಿಲಕಯಿಟ್ಟು, ಸಿಹಿ ನೀಡಿ ಸ್ವಾಗತಿಸಲಾಯಿತು. ಮೊದಲ ದಿನವಾಗಿದ್ದರಿಂದ ತರಗತಿಗಳಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಕರು ವಿವಿಧ ಚಟುವಟಿಕೆಗಳನ್ನು ಮಾಡಿಸಿದರು. ಪ್ರತಿ ವರ್ಷಕ್ಕಿಂತ ಈ ವರ್ಷ ಶಾಲೆಯ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಿಕೊಳ್ಳಲು ಎಲ್ಲಾ ಶಿಕ್ಷಕರು, ಸಿಬ್ಬಂದಿಗಳಿಗೆ ಮಾರ್ಗದರ್ಶನ ನೀಡಲಾಗಿದೆ. ಮಕ್ಕಳಿಗೆ ಪಠ್ಯ ಬೋಧನೆಯ ಜೊತೆ ಜೊತೆಗೆ ಪಠ್ಯೇತರ ಚಟುವಟಿಕೆ, ಕ್ರೀಡೆ ಹೀಗೆ ಪ್ರತಿಯೊಂದರಲ್ಲೂ ತೊಡಗಿಕೊಳ್ಳುವಂತೆ ನೋಡಿಕೊಳ್ಳಲು ಸೂಚನೆ ನೀಡಲಾಗಿದೆ ಎಂದರು.



ಶಾಲಾ ಪ್ರಾಂಶುಪಾಲರು ಹಾಗೂ ಶಿಕ್ಷಕರು, ಸಿಬ್ಬಂದಿ ಹಾಜರಿದ್ದರು.

# ಜಿಲ್ಲೆಯಲ್ಲಿ 15 ಜನರಿಗೆ ಡೆಂಗ್ಯೂ ದೃಢ

## ಆರೋಗ್ಯ ಇಲಾಖೆ ಮುನ್ನೆಚ್ಚರಿಕೆ | ಸ್ವಚ್ಛತೆ ಕಾಪಾಡಿಕೊಳ್ಳಲು ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಳೆಗಾಲದಲ್ಲಿ ವ್ಯಾಪಕವಾಗಿ ಹರಡುವ ಡೆಂಗ್ಯೂ ಸಾಂಕ್ರಾಮಿಕ ಕಾಯಿಲೆ ಈ ವರ್ಷವೂ ವರದಿಯಾಗುತ್ತಿದೆಯಾದರೂ ಕಳೆದ ವರ್ಷಕ್ಕೆ ಹೋಲಿಸಿದರೆ ಪ್ರಕರಣಗಳಲ್ಲಿ ಇಳಿಮುಖವಾಗಿದೆ.

2024ರ ಜೂನ್ ವೇಳೆಗೆ 122 ಡೆಂಗ್ಯೂ ಪ್ರಕರಣ ಪತ್ತೆಯಾಗಿತ್ತು ಮಾತ್ರವಲ್ಲದೆ ಇಬ್ಬರು ಮೃತಪಟ್ಟಿದ್ದರು. ಆದರೆ ಈ ಬಾರಿ 15 ಪ್ರಕರಣಗಳು ವರದಿಯಾಗಿವೆ. ಹಾಸನ ತಾಲ್ಲೂಕಿನಲ್ಲಿ 5, ಚನ್ನರಾಯಪಟ್ಟಣ 3, ಹೊಳೆನರಸೀಪುರ 3, ಆಲೂರು ಹಾಗೂ ಅರಕಲಗೂಡಿನಲ್ಲಿ ತಲಾ 2 ಪ್ರಕರಣ ಬೆಳಕಿಗೆ ಬಂದಿವೆ.

ಕಳೆದ ವರ್ಷಕ್ಕೆ ಹೋಲಿಸಿದರೆ ಡೆಂಗ್ಯೂ ಪಸರಿಸುವಿಕೆ ನಿಧಾನಗತಿಯಲ್ಲಿದ್ದು ಆರೋಗ್ಯ ಇಲಾಖೆ ನಿಟ್ಟುಸಿರು ಬಿಟ್ಟಿದೆ.

ಆದರೆ ಈಗಷ್ಟೇ ಮಳೆ ಆರಂಭವಾಗಿರುವುದರಿಂದ ಮುಂಜಾಗ್ರತೆ ವಹಿಸಬೇಕು ಎಂದು ಆರೋಗ್ಯ ಇಲಾಖೆಯ ಕೀಟ ಶಾಸ್ತ್ರಜ್ಞ ಡಾ. ರಾಜೇಶ್ ಕುಲಕರ್ಣಿ ಹೇಳಿದ್ದಾರೆ.



ಆರೋಗ್ಯ ಇಲಾಖೆ ಸಂಘಟಿತ ಹೋರಾಟ: ಕಳೆದ ಬಾರಿ ಡೆಂಗ್ಯೂ ವ್ಯಾಪಕವಾಗಿ ಹರಡಿದ್ದರಿಂದ ಸಾಂಕ್ರಾಮಿಕ ಕಾಯಿಲೆ ನಿಯಂತ್ರಣ ಆರೋಗ್ಯ ಇಲಾಖೆಗೆ ಸವಾಲಾಗಿ ಪರಿಣಮಿಸಿತ್ತು. ಜನವರಿ-ಫೆಬ್ರವರಿಯಲ್ಲಿ ಸ್ವಲ್ಪ ಮಳೆಯಾಗಿದ್ದರಿಂದ ಸೊಳ್ಳೆಗಳ ಉತ್ಪತ್ತಿಗೆ ಅನುಕೂಲ ಕಲ್ಪಿಸಿದಂತಾಗಿತ್ತು. ಸಾರ್ವಜನಿಕರು ತಮ್ಮ ಸುತ್ತಲಿನ ಪರಿಸರ ಸ್ವಚ್ಛವಾಗಿಟ್ಟುಕೊಳ್ಳದ ಪರಿಣಾಮ ತ್ವರಿತಗತಿಯಲ್ಲಿ ಈಡಿಸ್ ಸೊಳ್ಳೆಗಳು ಹುಟ್ಟಿಕೊಂಡವು.

ಮಾರ್ಚ್, ಏಪ್ರಿಲ್‌ನಲ್ಲಿ ಮದುವೆ ಮತ್ತಿತರ ಸಮಾರಂಭಗಳು ಹೆಚ್ಚಾಗಿ ನಡೆದು ಪ್ಲಾಸ್ಟಿಕ್ ಲೋಟ, ಬಾಟಲಿ, ಎಲೆಗಳನ್ನು ಎಲ್ಲೆಂದರಲ್ಲಿ ಬಿಸಾಡಿದ್ದರಿಂದ ಡೆಂಗ್ಯೂ ನಿರೀಕ್ಷೆ ಮೀರಿ ಗೋಚರಿಸಿತು. ಆದರೆ ಈ ವರ್ಷ ಮೇ ಅಂತ್ಯದಲ್ಲಿ ಮಳೆ ಶುರುವಾಗಿರುವುದರಿಂದ ಸೊಳ್ಳೆಗಳ ಉತ್ಪತ್ತಿ ಈಗಷ್ಟೇ ಶುರುವಾಗಿದೆ. ಕಳೆದ ವರ್ಷದ ಪರಿಸ್ಥಿತಿ ಮರುಕಳಿಸಬಾರದು ಎಂಬ ಉದ್ದೇಶದಿಂದ ಆರೋಗ್ಯ ಇಲಾಖೆ ಏಪ್ರಿಲ್‌ನಿಂದಲೇ ಲಾರ್ವಾ ಸಮೀಕ್ಷೆ, ಮನೆ ಮನೆ ಭೇಟಿ, ಗ್ರಾಮೀಣ ಭಾಗದಲ್ಲಿ ಆರೋಗ್ಯ ಜಾಗೃತಿ ಕಾರ್ಯಕ್ರಮಗಳನ್ನು ಆರಂಭಿಸಿದೆ.

> ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಡೆಂಗ್ಯೂ ಪ್ರಕರಣ ಕಡಿಮೆ ಇದೆ. ಹೋದ ವರ್ಷ ವೈರಸ್ 1, 2, 3 ವ್ಯಾಪಕವಾಗಿ ಹರಡಿತ್ತು. ಈಗ ವೈರಸ್ 2 ಮಾತ್ರ ಕಾಣಿಸಿಕೊಂಡಿದ್ದು ಮುಂದಿನ ದಿನಗಳಲ್ಲಿ ಉಳಿದ ವೈರಸ್‌ಗಳು ಗೋಚರಿಸಬಹುದು. ಸಾರ್ವಜನಿಕರು ಆದಷ್ಟು ಸ್ವಚ್ಛತೆಗೆ ಆದ್ಯತೆ ನೀಡಬೇಕು.
>
> **-ಡಾ. ರಾಜೇಶ್ ಕುಲಕರ್ಣಿ, ಜಿಲ್ಲಾ ಕೀಟ ಶಾಸ್ತ್ರಜ್ಞ**

ಆಶಾ ಹಾಗೂ ಆರೋಗ್ಯ ಕಾರ್ಯಕರ್ತೆಯರು ತಮ್ಮ ವ್ಯಾಪ್ತಿಯಲ್ಲಿ ಯಾರಾದರೂ ಅನಾರೋಗ್ಯದಿಂದ ಬಳಲುತ್ತಿದ್ದರೆ ಅಲ್ಲಿಗೆ ಭೇಟಿ ನೀಡಿ ಲಾರ್ವಾ ಸಮೀಕ್ಷೆ ಮಾಡುವುದು ಮಾತ್ರವಲ್ಲದೆ ಸ್ವಚ್ಛತೆಯ ಅರಿವು ಮೂಡಿಸುತ್ತಿದ್ದಾರೆ. ಹೀಗಾಗಿ ಡೆಂಗ್ಯೂ ನಿಯಂತ್ರಣಕ್ಕೆ ಬಂದಿದೆ.

ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅವರು ಸಹ ನಿರಂತರ ಸಭೆ ಮೂಲಕ ರೋಗ ನಿಯಂತ್ರಣಕ್ಕೆ ಎಚ್ಚರ ವಹಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದರು. ಆರೋಗ್ಯ ಇಲಾಖೆಗೆ ಗ್ರಾಮ ಪಂಚಾಯಿತಿಗಳು ಸಾಥ್ ನೀಡಿದ್ದರಿಂದ ಗ್ರಾಮಗಳಲ್ಲಿ ಸ್ವಚ್ಛತೆ, ಕೊಳಚೆ ನೀರು ನಿಲ್ಲದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ.

ರೋಗ ನಿಯಂತ್ರಣ ಕ್ರಮ: ಹಗಲು ಹೊತ್ತಿನಲ್ಲಿ ಕಚ್ಚುವ ಈಡಿಸ್ ಈಜಿಪ್ಟೈ ಸೊಳ್ಳೆಗಳಿಂದ ಡೆಂಗ್ಯೂ ಹರಡುತ್ತದೆ.

ಈ ಕಾಯಿಲೆಯಿಂದ ದೂರವಿರಬೇಕೆಂದರೆ ಮನೆಯಲ್ಲಿನ ಸಿಮೆಂಟ್ ತೊಟ್ಟಿ, ಡ್ರಂ, ಬ್ಯಾರೆಲ್, ಬಕೆಟ್ ಕೊಡಗಳಲ್ಲಿ ನೀರನ್ನು ಶೇಖರಿಸಿದ್ದರೆ ಅದನ್ನು ಮುಚ್ಚಿರಬೇಕು. ಕನಿಷ್ಠ ವಾರಕ್ಕೊಮ್ಮೆಯಾದರೂ ಸ್ವಚ್ಛಗೊಳಿಸಬೇಕು. ಮನೆ, ಶಾಲಾ-ಕಾಲೇಜು, ಕಚೇರಿ, ಅಂಗನವಾಡಿ, ಅಂಗಡಿ ಹಾಗು ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಆರೋಗ್ಯ ಇಲಾಖೆ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ಡೆಂಗ್ಯೂ ಜ್ವರದಿಂದ ರಕ್ಷಿಸಿಕೊಳ್ಳಲು ನೀಡುವ ಸಲಹೆ ಸೂಚನೆ ಪಾಲಿಸುವ ಮೂಲಕ ಆರೋಗ್ಯ ಕಾಪಾಡಿಕೊಳ್ಳಬೇಕು.

# ನೂತನ ಪರಿಕಲ್ಪನೆಯೊಂದಿಗೆ ಆವಿಷ್ಕಾರ ಗ್ಲೋಬಲ್ ಎಜುಕೇಶನ್ ಟ್ರಸ್ಟ್



ಚನ್ನರಾಯಪಟ್ಟಣ: ಮಕ್ಕಳನ್ನು ಶೈಕ್ಷಣಿಕವಾಗಿ ಉತ್ತಮ ರೀತಿಯಲ್ಲಿ ಬೆಳೆಸುವ ಜತೆಗೆ ಅವರಿಗೆ ನೈಸರ್ಗಿಕವಾಗಿ ಬೆಳೆಯುವಂತಹ ವಾತಾವರಣ ನಿರ್ಮಿಸುವ ಉದ್ದೇಶದಿಂದ ಪಟ್ಟಣದಲ್ಲಿ ಆವಿಷ್ಕಾರ ಗ್ಲೋಬಲ್ ಎಜುಕೇಶನ್ ಟ್ರಸ್ಟ್ ಆರಂಭಿಸಲಾಗಿದೆ ಎಂದು ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಾಗರಾಣಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಕ್ಕಳಲ್ಲಿ ಸಂಸ್ಕಾರ ಹಾಗೂ ಜ್ಞಾನವನ್ನು ಬೆಳೆಸುವುದು ಪೋಷಕರ ಜವಾಬ್ದಾರಿ. ಪ್ರತಿಯೊಬ್ಬ ಪಾಲಕರು ತಮ್ಮ ಜವಾಬ್ದಾರಿಗಳನ್ನು ಅರಿತು ಮಕ್ಕಳ ಭವಿಷ್ಯದಲ್ಲಿ ಬೆಳಕಾಗಿ ನಿಂತರೆ ಮಕ್ಕಳ ಬದುಕು ಹಾಗೂ ಸಮಾಜದ ಸ್ಥಿತಿಯು ಅತ್ಯುತ್ತಮವಾಗಿರುತ್ತದೆ. ಮಕ್ಕಳ ಭವಿಷ್ಯವು ಉಜ್ವಲವಾಗಿರಬೇಕು ಎನ್ನುವುದು ಪೋಷಕರ ಇಚ್ಛೆ. ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳನ್ನು ಅದಕ್ಕೆ ತಕ್ಕಂತೆ ಬೆಳೆಸುವುದು ಸವಾಲಿನ ಕೆಲಸ. ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಪೋಷಕರು ತುಂಬಾ ಶ್ರಮ ವಹಿಸುವರು. ಇದಕ್ಕಾಗಿ ಮಕ್ಕಳಿಗೆ ಒಳ್ಳೆಯ ಶಿಕ್ಷಣ, ಶಿಸ್ತು ಮತ್ತು ಮೌಲ್ಯಗಳನ್ನು ನೀಡಬೇಕಾಗುತ್ತದೆ. ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆ ಗುರುತಿಸುವುದು ಎಲ್ಲರ ಕರ್ತವ್ಯ ಎಂದರು.

ಭಾರತ ಸರ್ಕಾರವು 2013ರಲ್ಲಿ ರಾಷ್ಟ್ರೀಯ ಫ್ರೀ ಚೈಲ್ಡ್ ಕೇರ್ ಮತ್ತು ಎಜುಕೇಶನ್ ನೀತಿಯನ್ನ ಅಳವಡಿಸಿಕೊಂಡಿತು. ಇದು ಆರಂಭಿಕ ಬಾಲ್ಯ ಶಿಕ್ಷಣ ಸೇರಿದಂತೆ ಮತ್ತು ಶಾಶ್ವತ ಕಲಿಕೆಯ ಮೇಲೆ ಪ್ರಭಾವವನ್ನು ಗುರುತಿಸುತ್ತದೆ. ಪೂರ್ವ ಪ್ರಾಥಮಿಕ ಶಾಲೆಯಿಂದ ಮಕ್ಕಳಿಗೆ ಗುಣಮಟ್ಟದ ಮೂಲಭೂತ ಕಲಿಕೆಯ ಸಾಕ್ಷರತೆ ಹಾಗೂ ಸಂಖ್ಯಾತ್ಮಕ ಕೌಶಲ ಅಭಿವೃದ್ಧಿ ಭಾವನಾತ್ಮಕ ಸ್ಥಿತಿ ಬೆಳೆಸುತ್ತದೆ. ಮೆದುಳಿನ ಬೆಳವಣಿಗೆಗೆ ಸಹಕಾರಿಯಾಗಿ ಗೆಳೆಯರೊಂದಿಗೆ ಸಂಪರ್ಕ ಸಾಧಿಸುವುದು ಸ್ವತಂತ್ರರಾಗಿರುವುದನ್ನ ಕಲಿಯುತ್ತಾರೆ ಹಾಗೂ ಕಲಿಕೆಯ ಮೇಲೆ ಪ್ರೀತಿ ಬೆಳೆಸುತ್ತಾರೆ ಮಕ್ಕಳು ಚಟುವಟಿಕೆ ಆಧಾರಿತವಾಗಿ ನೋಡಿ ಕಲಿ ಮಾಡಿ ತಿಳಿ ಮೂಲಕ ಕಲಿತರೆ ಶಾಶ್ವತ ಕಲಿಕೆ ಮಕ್ಕಳಲ್ಲಿ ಉಂಟಾಗುತ್ತದೆ ಎಂದರು.

ಭಾರತದ ಇಸಿಎಎಸ್ ಆಧಾರದ ಮೇಲೆ ಬೆಂಗಳೂರಿನ ಸಂಸ್ಥೆಯಾದ ಹೋಲಿ ಕಿಡ್ಸ್ ವತಿಯಿಂದ ಪಠ್ಯಕ್ರಮವನ್ನ ರಚಿಸಲಾಗಿದ್ದು ಕರ್ನಾಟಕ ರಾಜ್ಯದಲ್ಲಿ 300 ಶಾಲೆಗಳಲ್ಲಿ 30,000 ಮಕ್ಕಳಿಗೆ ಈ ಪಠ್ಯಕ್ರಮ ಮೂಲಕ ಕಲಿಕೆಯನ್ನು ಹೇಳಿಕೊಡುವದರಲ್ಲಿ ಯಶಸ್ವಿಯಾಗಿದೆ. ಇಂತಹ ಒಂದು ಸಂಸ್ಥೆಯ ವತಿಯಿಂದ ಚನ್ನರಾಯಪಟ್ಟಣದಲ್ಲಿ ಮಕ್ಕಳ ಕಲಿಕೆಗೆ ಒಂದು ಉತ್ತಮ ಪೂರ್ವ ಪ್ರಾಥಮಿಕ ಶಾಲೆಯನ್ನು ಅವಿಷ್ಕಾರ ಗ್ಲೋಬಲ್ ಎಜುಕೇಶನ್ ಉತ್ತಮ ಸೌಲಭ್ಯಗಳ ಜೊತೆಗೆ ಉತ್ತಮ ಕಾಳಜಿ ವಿದ್ಯಾಭ್ಯಾಸ ನೀಡುತ್ತಿದೆ. ಈಗಿನ ಪೋಷಕರು ಪೂರ್ವ ಪ್ರಾಥಮಿಕ ಶಿಕ್ಷಣವನ್ನ ನೀಡುವಲ್ಲಿ ಗಮನ ಹರಿಸಿದರೆ ಮಕ್ಕಳು ಉತ್ತಮ ಭವಿಷ್ಯವನ್ನು ಹೊಂದಿ ದೇಶದ ಅತ್ಯುತ್ತಮ ಪ್ರಜೆಗಳಾಗುತ್ತಾರೆ ಎಂದು ತಿಳಿಸಿದರು.

ಆವಿಷ್ಕಾರ ಗ್ಲೋಬಲ್ ಎಜುಕೇಶನ್ ಟ್ರಸ್ಟ್ ನಿರ್ದೇಶಕಿ ಶಾಲಿನಿ ವಿಶ್ವನಾಥ್, ಚನ್ನರಾಯಪಟ್ಟಣ ಕೇಂದ್ರದ ಮುಖ್ಯಸ್ಥೆ ಸೌರಭ ಭಾಗವಹಿಸಿದ್ದರು.

# ವಿಸ್ಡಂ ವ್ಯಾಲಿ ಶಾಲೆಯಲ್ಲಿ ಗ್ರಾಜುಯೇಷನ್ ಡೇ



ಅರಕಲಗೂಡು: ಗ್ರಾಮೀಣ ಭಾಗದಲ್ಲಿ ಶಾಲೆಯನ್ನು ತೆರೆದು ಬಡಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಶ್ರಮಿಸುತ್ತಿರುವ ವಿಸ್ಡಂ ವ್ಯಾಲಿ ಇಂಟರ್‌ನ್ಯಾಷಿನಲ್ ಶಾಲೆ ಮೊದಲ ಬ್ಯಾಚ್‌ನ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ.100ರಷ್ಟು ಫಲಿತಾಂಶ ಪಡೆದಿದೆ ಎಂದು ಶಿಕ್ಷಣ ಸಂಸ್ಥೆ ಮುಖ್ಯಸ್ಥ ಶಕೀಬ್ ಉರ್ ರೆಹಮನ್ ತಿಳಿಸಿದರು.

ತಾಲ್ಲೂಕಿನ ಮೋಕಲಿ ವಿಸ್ಡಂ ವ್ಯಾಲಿ ಇಂತರ್‌ನ್ಯಾಷನಲ್ ಸ್ಕೂಲ್‌ನಲ್ಲಿ ಗುರುವಾರ ಪ್ರೀ ಕೆಜಿ ಮಕ್ಕಳಿಗೆ ಹಮ್ಮಿಕೊಂಡಿದ್ದ ಗ್ರಾಜುಯೇಷನ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯಾರೂ ಕೂಡ ಹಳ್ಳಿಯಲ್ಲಿ ಶಾಲೆ ತೆರೆಯುವುದಿಲ್ಲ. ನಮ್ಮ ತಂದೆಯ ಆಶಯದಂತೆ ಪಟ್ಟಣದಿಂದ 5 ಕಿ.ಮೀ. ದೂರದಲ್ಲಿ ಶಾಲೆ ಆರಂಭಿಸಿ ಸುಮಾರು 600 ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಇತರೆ ಪೂರಕ ಚಟುವಟಿಕೆಗಳನ್ನು ಒದಗಿಸಲಾಗುತ್ತಿದೆ. ಮುಂದಿನ ಎಲ್ಲಾ ವರ್ಷದ ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ಶೇ. 100ರಷ್ಟು ಫಲಿತಾಂಶ ಪಡೆಯಲಾಗುವುದು. ಪೋಷಕರು ನಮ್ಮ ಮೇಲೆ ನಂಬಿಕೆ ಇಟ್ಟಿರುವುದನ್ನು ಉಳಿಸಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು. ಹತ್ತಾರು ಎಕರೆ ಪ್ರದೇಶದಲ್ಲಿ ಶಾಲೆ ಕಾರ್ಯನಿರ್ವಹಿಸುತ್ತಿದೆ. ಪಟ್ಟಣ ಪ್ರದೇಶದ ಯಾವುದೇ ಖಾಸಗಿ ಶಾಲೆಯನ್ನು ಮೀರುವಂತಹ ಸುಸಜ್ಜಿತ ಕಟ್ಟಡ, ಶಿಕ್ಷಕ ವೃಂದ ಇದೆ. ಬಸ್ ಸೌಕರ್ಯ ಇದೆ. ಮುಂದಿನ ಶೈಕ್ಷಣಿಕ ಸಾಲಿನಲ್ಲಿ ಪಿಯುಸಿ ತಗರಗತಿ ಆರಂಭಿಸುವ ಚಿಂತನೆ ಇದೆ. ಗ್ರಾಮೀಣ ಭಾಗದ ಪೋಷಕರ ಸಹಕಾರ ಸಿಕ್ಕರೇ ಬೇಗ ಕಾರ್ಯರೂಪಕ್ಕೆ ತರಲಾಗುವುದು ಎಂದು ಹೇಳಿದರು.

# ಸವಲತ್ತು ಕಲ್ಪಿಸಲು ಆಗ್ರಹಿಸಿ ಪೌರ ಕಾರ್ಮಿಕರ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪೌರಕಾರ್ಮಿಕರು ಮತ್ತು ಪೌರ ಸೇವಾ ನೌಕರರು ಕರ್ತವ್ಯದಿಂದ ಹೊರಗುಳಿದು ಅನಿರ್ದಿಷ್ಟಾವಧಿ ಮುಷ್ಕರ ಕೈಗೊಂಡಿದ್ದಾರೆ.

ಪಟ್ಟಣ ಪಂಚಾಯಿತಿ ಕಚೇರಿ ಮುಂಭಾಗ ಮುಖ್ಯಾಧಿಕಾರಿ ಹೊರತುಪಡಿಸಿ ಉಳಿದೆಲ್ಲ ಪೌರ ಕಾರ್ಮಿಕರು, ಪೌರ ನೌಕರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದಾರೆ.

ಸದಾ ಸಾರ್ವಜನಿಕ ಸೇವೆಯನ್ನು ಮೈಗೂಡಿಸಿಕೊಂಡಿರುವ ಪೌರ ನೌಕರರು, ಗುತ್ತಿಗೆ ಪೌರಕಾರ್ಮಿಕರ ಬದುಕು ಸಂಕಷ್ಟಕ್ಕೀಡಾಗಿದೆ. ಮಾನಸಿಕ, ದೈಹಿಕ ಸಾಮರ್ಥ್ಯವನ್ನು ಲೆಕ್ಕಿಸದೇ ನಿತ್ಯವೂ ಪಟ್ಟಣದ ಸ್ವಚ್ಛತೆ, ಇತರೆ ಅವಶ್ಯ ಕೆಲಸಗಳನ್ನು ನಿರ್ವಹಿಸುತ್ತಿದ್ದು, ನಮಗೂ ಕೂಡ ರಾಜ್ಯ ಸಕಾಊರಿ ನೌಕರರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಸಕಾಊರ ಒದಗಿಸಬೇಕೆಂದು ಆಗ್ರಹಿಸಿದರು.



ಹೊರಗುತ್ತಿಗೆ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ನೀರು ಸರಬರಾಜು, ಚಾಲಕರು, ಲೋಡರ್ಸ್ ಕ್ಲೀನರ್ಸ್ ಗಾರ್ಡನರ್, ಸ್ಯಾನಿಟರಿ ಮೇಲ್ವಿಚಾರಕರು, ಯುಜಿಡಿ ಸಹಾಯಕರು ಸೇರಿದಂತೆ ವಿವಿಧ ವೃಂದದ ಹೊರಗುತ್ತಿಗೆ ನೌಕರರನ್ನು ನೇರ ಪಾವತಿಗೆ ಒಳಪಡಿಸಬೇಕು. ದಿನಗೂಲಿ, ಕ್ಷೇಮಾಭಿವೃದ್ಧಿ ಸಮಾನ ಕೆಲಸಕ್ಕೆ ಸಮಾನ ವೇತನ ನೌಕರರನ್ನು ಖಾಯಂ ಮಾಡಬೇಕು. ಎಲ್ಲಾ ನೌಕರರಿಗೆ ಎಸ್‌ಎಫ್‌ಸಿ ಮುಕ್ತ ನಿಧಿಯಿಂದ ವೇತನ ನೀಡಬೇಕೆಂದು ಪ್ರತಿಭಟನಾ ನಿರತರು ಸರ್ಕಾರವನ್ನು ಒತ್ತಾಯಿಸಿದರು.

ಪ್ರತಿಭಟನೆಗೆ ಬೆಂಬಲಿ ಮಾತನಾಡಿದ ಹಿರಿಯ ವಕೀಲ ಮತ್ತು ಮಾಜಿ ಪಪಂ ಸದಸ್ಯ ಶಂಕರಯ್ಯ ಅವರು, ದೇಶಕ್ಕೆ ಅನ್ನ ಕೊಡುವ ರೈತ, ದೇಶ ಕಾಯುವ ಸೈನಿಕರಂತೆಯೇ ನಮ್ಮ ಪೌರಕಾರ್ಮಿಕರು ಕೂಡ ಪಟ್ಟಣ, ನಗರ ಸ್ವಚ್ಛತೆಯ ಸೇನಾನಿಗಳಾಗಿದ್ದಾರೆ. ಪೌರ ಕಾರ್ಮಿಕರ ಸೇವೆ ನಿತ್ಯವೂ ಅತ್ಯವಶ್ಯಕವಾಗಿದೆ. ಆದರೆ ಕನಿಷ್ಠ ವೇತನ, ಮೂಲಸೌಕರ್ಯ ಕಲ್ಪಿಸುವಲ್ಲಿ ಸರ್ಕಾರ ಮಲ ತಾಯಿ ಧೋರಣೆ ಅನುಸರಿಸುತ್ತಿದೆ. ಸ್ಥಳೀಯ ಸಂಸ್ಥೆಗಳ ನೌಕರರನ್ನು ಸರ್ಕಾರಿ ನೌಕರರಂತೆ ಪರಿ ಗಣಿಸಬೇಕು ಎಂದು ಆಗ್ರಹಿಸಿದರು.

ಪಟ್ಟಣ ಪಂಚಾಯಿತಿಯಲ್ಲಿ ಖಾಯಂ ನೌಕರರು, ಹೊರಗುತ್ತಿಗೆ ಮತ್ತು ಒಳಗುತ್ತಿಗೆಯಡಿ ಕೆಲಸ ಮಾಡುತ್ತಿರುವ ನೌಕರರನ್ನು ಕಾಯಂ ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸಬೇಕು. ಈ ಬೇಡಿಕೆ ಈಡೇರಿಕೆ ಆಗುವ ತನಕ ಮುಷ್ಕರವನ್ನು ಹಿಂದಕ್ಕೆ ಪಡೆಯುವುದಿಲ್ಲ. ಇದರಿಂದ ಸಾರ್ವಜನಿಕರಿಗೆ ತೊಂದರೆ ಆಗಬಹುದು. ನಮ್ಮ ನ್ಯಾಯಯುತ ಬೇಡಿಕೆಗೆ ಜನರು ಸಹಕರಿಸಬೇಕೆಂದು ನೌಕರರ ಸಂಘದ ಸದಸ್ಯೆ ಶಿವಮ್ಮ ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಪೌರ ಸೇವಾ ನೌಕರರ ಸಂಘದ ಅಧ್ಯಕ್ಷ ಅಣ್ಣೆಗೌಡ, ಉಪಾಧ್ಯಕ್ಷ ರವಿ, ನೌಕರರಾದ ದೀಕ್ಷಿತ್, ಹೇಮಂತ್, ದೀಪಾ, ನಾರಾಯಣಸ್ವಾಮಿ, ಚಂದನಾ, ಶ್ರುತಿ, ವಿಮಲಾ, ಸುವರ್ಣ, ಶಾಂತಮ್ಮ, ಕನಕ, ನಾಗಮ್ಮ ಹಾಗೂ ಇತರರು ಪಾಲ್ಗೊಂಡಿದ್ದರು.

# ಹೆಲ್ಮೆಟ್ ಧರಿಸದೆ ಟ್ರ್ಯಾಕ್ಟರ್ ಚಾಲನೆ: ದಂಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಹೆಲ್ಮೆಟ್ ಧರಿಸದೆ ವಾಹನ ಚಾಲನೆ ಮಾಡಿದ್ದೀರಿ 500 ರೂಪಾಯಿ ದಂಡ ಕಟ್ಟಬೇಕು ಎಂದು ಮೈಸೂರು ಪೊಲೀಸರಿಂದ ತಾಲ್ಲೂಕಿನ ಕಾಫಿ ಬೆಳೆಗಾರರೊಬ್ಬರಿಗೆ ನೋಟಿಸ್ ಬಂದಿದೆ. ಬಾಳ್ಳುಪೇಟೆಯ ಕಿತ್ತಲೆಮನೆ ಎಸ್ಟೇಟ್ ಕಾಫಿ ಬೆಳೆಗಾರ ಬಿ.ಎಸ್. ರೋಹಿತ್ ಅವರ ಮೊಬೈಲ್‌ಗೆ ಟ್ರಾಫಿಕ್ ಪೊಲೀಸ್‌ನಿಂದ ನೋಟಿಸ್ ಬಂದಿದೆ. ನೀವು 2024ರ ಡಿಸೆಂಬರ್ 8ರಂದು ಮೈಸೂರಿನ ಕಲ್ಪತರುಹುಣಸೂರು ನಡುವಿನ ಕೋರ್ಟ್ ರಸ್ತೆಯಲ್ಲಿ ಹೆಲ್ಮೆಟ್ ಹಾಕದೆ ವಾಹನ ಚಾಲನೆ ಮಾಡಿದ್ದೀರಿ, 500 ರೂಪಾಯಿ ದಂಡ ಕಟ್ಟಿ, ಕಾನೂನು ಕ್ರಮ ಕೈಗೊಳ್ಳುವುದನ್ನು ತಪ್ಪಿಸಿಕೊಳ್ಳಿ ಎಂದು ಬರೆಯಲಾಗಿದೆ.

ನೋಟಿಸ್ ನೋಡಿ ರೋಹಿತ್ ನನ್ನ ಬಳಿ ಈ ನಂಬರಿನ ದ್ವಿಚಕ್ರ ವಾಹನವೇ ಇಲ್ಲ. ಅದೂ ಅಲ್ಲದೆ, ದ್ವಿಚಕ್ರ ವಾಹನವನ್ನೇ ಓಡಿಸುವುದಿಲ್ಲ ಎಂದು ಯೋಚನೆ ಮಾಡಿದ್ದಾರೆ. ಆದರೆ ನೋಟಿಸ್‌ನಲ್ಲಿ ಬರೆದಿರುವ ವಾಹನ ನಂಬರ್ ತಮ್ಮ ಟ್ರ್ಯಾಕ್ಟರ್ ಟ್ರೈಲರ್‌ದ್ದಾಗಿದೆ ಎಂದು ಖಚಿತವಾಗಿದೆ. ಇತ್ತೀಚೆಗೆ ಯಡೇಹಳ್ಳಿ ಆರ್. ಮಂಜುನಾಥ್ ಅವರ ಟ್ರ್ಯಾಕ್ಟರ್ ನಂಬರಿಗೂ ಸಹ ಹೆಲ್ಮೆಟ್ ಹಾಕದೆ ವಾಹನ ಓಡಿಸಿದ್ದೀರಿ ಎಂದು ನೋಟೀಸ್ ಬಂದಿತ್ತು.

# ಇತಿಹಾಸದಲ್ಲಿ ಈ ದಿನ

## ಮೇ -31

**1774:** ಭಾರತದಲ್ಲಿ ಮೊದಲ ಅಂಚೆ ಕಚೇರಿ ಸ್ಥಾಪನೆಯಾಯಿತು, ಇದು ದೇಶದ ಸಂವಹನ ವ್ಯವಸ್ಥೆಯ ಮೂಲಸ್ತಂಭವಾಯಿತು.

**1867:** ಮುಂಬೈನಲ್ಲಿ ಪ್ರಾರ್ಥನಾ ಸಮಾಜ ಸ್ಥಾಪನೆಯಾಯಿತು. ಇದು ಧಾರ್ಮಿಕ ಮತ್ತು ಸಾಮಾಜಿಕ ಸುಧಾರಣೆಗೆ ಪ್ರೇರಣೆಯಾಯಿತು.

**1921:** ಈ ದಿನ ಕಾಂಗ್ರೆಸ್ ಪಕ್ಷ ತನ್ನ ಧ್ವಜವನ್ನು ಅಧಿಕೃತವಾಗಿ ಅಂಗೀಕರಿಸಿತು, ಇದು ನಂತರ ಭಾರತದ ರಾಷ್ಟ್ರಧ್ವಜದ ಆಧಾರವಾಯಿತು.

**1964:** ಮುಂಬೈನ ಎಲೆಕ್ಟ್ರಿಕ್ ಟ್ರಾಮ್ ಸೇವೆ ಕೊನೆಗೊಂಡು ನಗರ ಸಾರಿಗೆ ವ್ಯವಸ್ಥೆಯಲ್ಲಿ ಹೊಸ ಅಧ್ಯಾಯ ಆರಂಭವಾಯಿತು.

**1935:** ಬ್ರಿಟಿಷ್ ಇಂಡಿಯಾದ ಬಲೂಚಿಸ್ತಾನದಲ್ಲಿ ಸಂಭವಿಸಿದ 7.7 ತೀವ್ರತೆಯ ಭೂಕಂಪದಲ್ಲಿ 30,000 ರಿಂದ 60,000 ಜನರು ಮೃತಪಟ್ಟರು.

ವಿಶ್ವ ತಂಬಾಕು ನಿರೋಧ ದಿನ: ಪ್ರತಿವರ್ಷ ಮೇ 31 ರಂದು ವಿಶ್ವ ಆರೋಗ್ಯ ಸಂಸ್ಥೆ ತಂಬಾಕು ಬಳಕೆಯ ಹಾನಿಕಾರಕ ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸುತ್ತದೆ.

### ಜನನ

**1725:** ಅಹಿಲ್ಯಾಬಾಯಿ ಹೋಳ್ಕರ್. ಮಹಾರಾಷ್ಟ್ರದ ಭೌಂಡಿ ಗ್ರಾಮದಲ್ಲಿ ಜನಿಸಿದ ಅಹಿಲ್ಯಾಬಾಯಿ, ಹೋಳ್ಕರ್ ವಂಶದ ಶಕ್ತಿಶಾಲಿ ರಾಣಿ. ಅವರು ಕಾಶಿ ವಿಶ್ವನಾಥ, ಸೋಮನಾಥ ಸೇರಿ ಹಲವಾರು ದೇವಾಲಯಗಳನ್ನು ಪುನರ್ ನಿರ್ಮಿಸಿದರು. ಮಹಿಳಾ ಸಬಲೀಕರಣಕ್ಕೆ ಮಹತ್ವದ ಕೊಡುಗೆ ನೀಡಿದರು.

**1992:** ಸೋಭಿತಾ ಧುಲಿಪಾಲ. ಭಾರತೀಯ ನಟಿ ಮತ್ತು ಮಾದರಿ, 2013ರಲ್ಲಿ ಮಿಸ್ ಎರ್ಥ್ ಇಂಡಿಯಾ ಪ್ರಶಸ್ತಿ ವಿಜೇತೆ.

# ಹಾದಿ ತಪ್ಪುತ್ತಿದೆ ಪರಿಶಿಷ್ಟ ಜಾತಿ ಸಮೀಕ್ಷೆ: ಆರೋಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪರಿಶಿಷ್ಟ ಜಾತಿ ಒಳ ಪಂಗಡಗಳ ಸಮೀಕ್ಷೆಯಲ್ಲಿ ಗೊಂದಲ ಉಂಟಾಗಿರುವುದರಿಂದ ಜಾತಿಗಣತಿ ಹಾದಿ ತಪ್ಪುವ ಅಪಾಯದಲ್ಲಿದೆ ಎಂದು ದಲಿತ ಮುಖಂಡ ಕೃಷ್ಣದಾಸ್ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಲವು ಕಡೆಗಳಲ್ಲಿ ಆಯೋಗದ ನಿರ್ದೇಶನಗಳನ್ನು ಗಾಳಿಗೆ ತೂರಿ ಬೇಕಾಬಿಟ್ಟಿ ಸಮೀಕ್ಷೆ ಮಾಡಲಾಗುತ್ತಿದೆ. ಇದರಿಂದ ನಿಖರ ದತ್ತಾಂಶ ದೊರೆಯುವುದು ಕಷ್ಟವಾಗಿದೆ. ಈಗಾಗಲೇ 20 ದಿನಗಳ ಕಾಲ ಸಮೀಕ್ಷೆ ಕಾರ್ಯ ಮುಗಿದಿದೆ. ಗಣತಿದಾರರು ಎಲ್ಲೂ ಕೂಡ ಆಯೋಗದ ನಿರ್ದೇಶನದಂತೆ 42 ಪ್ರಶ್ನೆಗಳನ್ನು ಕೇಳುತ್ತಿಲ್ಲ. ತಮಗಿಷ್ಟ ಬಂದಂತೆ ಬರೆದುಕೊಂಡು ಹೋಗುತ್ತಿದ್ದಾರೆ ಎಂದು ದೂರಿದರು.

ಒಂದು ಕುಟುಂಬದಲ್ಲಿ ಐವರು ಸದಸ್ಯರಿದ್ದರೆ ಮೂವರನ್ನಷ್ಟೇ ನೋಂದಣಿ ಮಾಡಿಕೊಂಡು, ಇಲ್ಲ ಸಲ್ಲದ ನೆಪ ಹೇಳಿ ನಾಳೆ ಬರುತ್ತೇವೆ ಎಂದು ಹೇಳಿ ಹೋದವರು ಬರುವುದೇ ಇಲ್ಲ. ಈ ಸಂಬಂಧ ಜಿಲ್ಲಾಧಿಕಾರಿ, ಆಯೋಗಕ್ಕೆ ದೂರು ನೀಡಲಾಗಿದೆ. ಇದಕ್ಕೆ ಸ್ಪಂದಿಸಿದ ಆಯೋಗ ಸಮೀಕ್ಷೆ ಕಾರ್ಯದ ದಿನಾಂಕವನ್ನು ವಿಸ್ತರಿಸಿ, ಜೂನ್ ಒಂದನೇ ತಾರೀಕಿಗೆ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದೆ. ಆದರೆ ಗಣತಿದಾರರ ಬೇಜವಾಬ್ದಾರಿಯಿಂದಾಗಿ ವಿಫಲಗೊಳ್ಳುವ ಆತಂಕ ಎದುರಾಗಿದೆ ಎಂದು ಹೇಳಿದರು.




ಗಣತಿದಾರರು ನಗರ ಪ್ರದೇಶಗಳಲ್ಲಿ ಮನೆ ಮನೆ ಸಮೀಕ್ಷೆ ಮಾಡದೆ ಯಾವುದೋ ಅಂಗಡಿಯವರು ಅಥವಾ ಪುರಸಭೆ, ನಗರಸಭೆ ಸದಸ್ಯರನ್ನು ವಿಚಾರಿಸಿಕೊಂಡು ಆಯೋಗದ ನಿರ್ದೇಶನಗಳನ್ನು ಗಾಳಿಗೆ ತೂರಿ ಬೇಕಾಬಿಟ್ಟಿ ಸಮೀಕ್ಷೆ ಮಾಡಲಾಗುತ್ತಿದೆ. ಈ ಬಗ್ಗೆ ಆಯೋಗ ಮತ್ತು ಜಿಲ್ಲಾಡಳಿತ ಗಂಭೀರ ಚಿಂತನೆ ನಡೆಸಬೇಕಿದೆ. ಸಮೀಕ್ಷೆ ಕಾರ್ಯದಲ್ಲಿ ಆಯೋಗದ ನಿರ್ದೇಶನದಂತೆ ಸುಮಾರು 42 ಪ್ರಶ್ನಾವಳಿ ಕೇಳಬೇಕು, ಆದರೆ ಗಣತಿದಾರರು ಕೇವಲ ಮೂರು ನಾಲ್ಕು ಪ್ರಶ್ನೆ ಕೇಳಿ, ಉಳಿದ ಪ್ರಶ್ನೆಗಳಿಗೆ ತಮಗಿಷ್ಟ ಬಂದಂತೆ ಬರೆದುಕೊಂಡು ಹೋಗುತ್ತಿದ್ದಾರೆ. ಈ ಬಗ್ಗೆ ಆಯೋಗ ಮತ್ತು ಜಿಲ್ಲಾಡಳಿತ ನಿರ್ದೇಶನ ನೀಡಬೇಕು ಎಂದರು.

ಜಿಲ್ಲೆಯ ಮಲೆನಾಡು ಭಾಗದಲ್ಲಿ ಜೋರು ಮಳೆಯಾಗುತ್ತಿದ್ದು, ಸಮೀಕ್ಷೆಗೆ ಅಡ್ಡಿಯಾಗಿದೆ. ಈ ಬಗ್ಗೆ ಆಯೋಗ ಗಮನಹರಿಸಿ ಗಣತಿ ಕಾರ್ಯವನ್ನು ಮತ್ತೊಮ್ಮೆ ಮುಂದೂಡಬೇಕು. ಜಾತಿ ಜನಗಣತಿ ಸಮೀಕ್ಷಾ ಕಾರ್ಯದ ಮೇಲುಸ್ತುವಾರಿ ವಹಿಸಿರುವ ಜಿಲ್ಲಾ ಮತ್ತು ತಾಲೂಕು ಸಮಾಜ ಕಲ್ಯಾಣಾಧಿಕಾರಿಗಳು ನಿರ್ಲಕ್ಷ್ಯ ಮಾಡದೆ ಗಣತಿದಾರರ ಸಭೆ ಕರೆದು, ನಿರ್ಲಕ್ಷ್ಯ ಮತ್ತು ಬೇಜವಾಬ್ದಾರಿಯಿಂದ ವರ್ತಿಸುವ ಗಣತಿದಾರರ ಬಗ್ಗೆ ಡಿಸಿ ಅವರಿಗೆ ವರದಿ ನೀಡಬೇಕು, ಪರಿಶೀಲಿಸಿ ಡಿಸಿ ಅವರು ಸೂಕ್ತ ಕ್ರಮ ಕೈಗೊಳ್ಳಬೇಕು. ಇದೇ ವೇಳೆ ಜಂಗಮ ಬೇಡ ಹೆಸರಿನಲ್ಲಿ ಸುಳ್ಳು ಪರಿಶಿಷ್ಟ ಜಾತಿ ಪ್ರಮಾಣ ಪತ್ರ ಪಡೆಯುತ್ತಿರುವವರ ಮೇಲೆ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ದಲಿತ ಸಂಘಟನೆಗಳ ಸಮನ್ವಯ ಸಮಿತಿಯ ಆರ್.ಪಿ.ಐ. ಸತೀಶ್, ಅಂಬುಗ ಮಲ್ಲೇಶ್, ಹರೀಶ್ ಉಳುವಾರೆ, ಶಿವಮ್ಮ ಇದ್ದರು.

# 'ಸುಮಾ ದಿ ಫ್ಲವರ್' ಚಿತ್ರಕ್ಕೆ ಫಾಲ್ಕೆ ಪ್ರಶಸ್ತಿಯ ಗರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೆಂಗಳೂರು : ರಶ್ಮಿ ಎಸ್. (ಸಾಯಿ ರಶ್ಮಿ) ನಿರ್ದೇಶನದ 'ಸುಮಾ ದಿ ಫ್ಲವರ್' ಚಿತ್ರಕ್ಕೆ ಮುಂಬೈನಲ್ಲಿ ನಡೆದ ಪ್ರತಿಷ್ಠಿತ ದಾದಾ ಸಾಹೇಬ್ ಫಾಲ್ಕೆ ಫಿಲಂ ಪುರಸ್ಕಾರ್ ಆಫ್ ಇಂಡಿಯಾದಲ್ಲಿ ಪ್ರಶಸ್ತಿ ಲಭಿಸಿದೆ.

ಮಹಿಳಾ ಕಥಾಹಂದರ ಹೊಂದಿರುವ ಚಿತ್ರ ಇದಾಗಿದೆ. ನಮ್ಮ ನಡುವೆ ಇರುವ ಹುಡುಗಿಯೊಬ್ಬಳ ಅಂತರಂಗದ ಕಥೆಯಾಗಿದ್ದು, ಅತೀ ಸೂಕ್ಷ್ಮ ವಿಷಯವನ್ನು ಚಿತ್ರವು ಒಳಗೊಂಡಿದೆ. ಪ್ರತಿಯೊಬ್ಬ ಭಾರತೀಯ ಮಹಿಳೆಯರು ತಪ್ಪದೇ ನೋಡಲೇಬೇಕಾದ ಚಿತ್ರ ಇದಾಗಿದೆ. ಈಗಾಗಲೇ ಹಲವು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಗಳಲ್ಲಿ ಭಾಗವಹಿಸಿ ಅನೇಕ ಪ್ರಶಸ್ತಿಗಳನ್ನು ತನ್ನದಾಗಿಸಿಕೊಂಡಿದೆ.

ಯುವ ಮಹಿಳಾ ನಿರ್ದೇಶಕಿಯಾಗಿ ಕನ್ನಡ ಚಿತ್ರರಂಗದಲ್ಲಿ ಗುರುತಿಸಿಕೊಂಡಿರುವ ರಶ್ಮಿ ಎಸ್. ಈ ಹಿಂದೆ ಶ್ರೀ ಕಬ್ಬಾಳಮ್ಮನ ಮಹಿಮೆ, ಮನೆ, ಬ್ಯಾಂಕ್ ಲೋನ್, ಸುಳಿ ಎಂಬ ವಿಭಿನ್ನ ಕಥೆಯನ್ನು ಸಿನಿಮಾಗಳ ನಂತರ ಆಸುಮಾ ದಿ ಫ್ಲವರ್ಟ ಚಿತ್ರಕ್ಕೆ ಕಥೆ ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದಾರೆ. ಮುಖ್ಯ ಪಾತ್ರದಲ್ಲಿ ಮಾನ್ಯತಾ ನಾಯ್ಡು, ಪ್ರದೀಪ್ ಗೌಡ ಅಭಿನಯಿಸಿದ್ದು ಉಳಿದಂತೆ ಜೋ ಸೈಮನ್, ಬಲರಾಜವಾಡಿ, ವಿಜಯಲಕ್ಷ್ಮಿ ಉಪಾಧ್ಯಾಯ, ಕಾವ್ಯ ಪ್ರಕಾಶ್, ಪವಿತ್ರ, ಡಿ.ಆರ್. ಮುರಳೀಧರ್, ಅವಿನಾಶ್ ಗಂಜಿಹಾಳ, ಸಿದ್ದು ಮಂಡ್ಯ, ಭೈರವಿ, ಬಿ.ಪಿ.ಹರಿಹರನ್, ಶಿವಕುಮಾರ್ ಆರಾಧ್ಯ, ವಿಶೇಷ ಪಾತ್ರದಲ್ಲಿ ಡಾ.ವಿ ನಾಗೇಂದ್ರಪ್ರಸಾದ್ ಅಭಿನಯಿಸಿದ್ದಾರೆ. ದೇವೂ ಮತ್ತು ಗಗನ್ ಆರ್ ಛಾಯಾಗ್ರಾಹಣವಿದೆ. ವೇದಾಂತ್ ಅತಿಶಯ್ ಜೈನ ಸಂಗೀತ ಮತ್ತು ಹಿನ್ನೆಲೆ ಸಂಗೀತ, ಯೋಗಶ್ರೀ ಹಿನ್ನೆಲೆ ಗಾಯನ, ಮುತ್ತುರಾಜು ಟಿ. ಸಂಕಲನ, ಕಾರ್ತಿಕ್ ಸುಧನ್, ಡಾ. ಪ್ರಭು ಗಂಜಿಹಾಳ , ಡಾ. ವೀರೇಶ್ ಹಂಡಿಗಿ ಪತ್ರಿಕಾ ಸಂಪರ್ಕ ಚಿತ್ರಕ್ಕಿದ್ದು ಓಂ ಸಾಯಿ ಸಿನಿಮಾಸ್ ಸಂಸ್ಥೆಯ ಜೊತೆಗೆ ರಂಗಸ್ವಾಮಿ ಟಿ. ಅವರು ಸಹ ನಿರ್ಮಾಪಕರಾಗಿದ್ದಾರೆ.

# ಕಬ್ಬು ಅರೆಯುವ ಕಾರ್ಯ ಆರಂಭವಾಗಲಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನ ಶ್ರೀನಿವಾಸಪುರದಲ್ಲಿರುವ ಚಾಮುಂಡೇಶ್ವರಿ ಶುಗರ್ಸ್ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಪ್ರಸಕ್ತ ಸಾಲಿನ ಕಬ್ಬು ಅರೆಯುವಿಕೆಯನ್ನು ಜೂನ್‌ನಲ್ಲಿ ತಿಂಗಳಲ್ಲಿ ಪ್ರಾರಂಭಿಸಬೇಕು ಎಂದು ರಾಜ್ಯ ರೈತ ಸಂಘದ ಅಧ್ಯಕ್ಷ ಅರಳಾಪುರ ಮಂಜೇಗೌಡ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿರುವ ಚಾಮುಂಡೇಶ್ವರಿ ಸಕ್ಕರೆ ಕಾರ್ಖಾನೆಯಲ್ಲಿ ಜೂನ್ ತಿಂಗಳ ಮೊದಲ ವಾರದಲ್ಲಿ ಕಬ್ಬು ಅರೆಯುವಿಕೆ ಆರಂಭಿಸಲು ಕಬ್ಬು ಅಭಿವೃದ್ಧಿ ಆಯುಕ್ತರು ಮತ್ತು ಸಕ್ಕರೆ ನಿರ್ದೇಶಕರು ಒಪ್ಪಿದ್ದಾರೆ. ಈಚೆಗೆ ಬೆಂಗಳೂರಿನಲ್ಲಿ ಕಬ್ಬು ಅಭಿವೃದ್ಧಿ ಆಯುಕ್ತರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಪರಿಣಾಮ ಮಂಡ್ಯ, ಮೈಸೂರು ಮತ್ತು ಹಾಸನ ಜಿಲ್ಲೆಯಲ್ಲಿರುವ ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬು ಅರೆಯುವಿಕೆ ಪ್ರಾರಂಭಿಸಲು ಅವರು ಸಕರಾತ್ಮಕವಾಗಿ ಸ್ಪಂದಿಸಿದ್ದಾರೆ. ತಾಲ್ಲೂಕಿನ ರೈತರು ನಾಟಿ ಮಾಡಿರುವ ಕಬ್ಬಿನ ಬೆಳೆಗೆ 12 ತಿಂಗಳು ಪೂರ್ಣಗೊಂಡಿದೆ. ಕೂಡಲೇ ಅದನ್ನು ಕಟಾವು ಮಾಡದಿದ್ದರೆ ರೈತರು ಆರ್ಥಿಕ ನಷ್ಟ ಅನುಭವಿಸಬೇಕಾಗುತ್ತದೆ. ಕಬ್ಬು ಕಟಾವು ಮಾಡಲು ಇದು ಸೂಕ್ತ ಸಮಯ ಮತ್ತು ಸಕ್ಕರೆ ಇಳುವರಿ ಉತ್ತಮವಾಗಿರುತ್ತದೆ. ಇಂದಿನಿಂದಲೇ ಸಿದ್ಧತೆ ಮಾಡಿಕೊಂಡು ಜೂನ್ ಮೊದಲ ವಾರದಲ್ಲಿ ಕಬ್ಬು ಅರೆಯುವುದನ್ನು ಪ್ರಾರಂಭಿಸಬೇಕು. ಕಾರ್ಖಾನೆಯ ಆಡಳಿತ ಮಂಡಳಿ ಕೂಡಲೇ ಕಬ್ಬು ಅರೆಯುವ ದಿನಾಂಕ ಪ್ರಕಟಿಸಬೇಕು ಎಂದು ಒತಾಯಿಸಿದರು.

# ಪತ್ನಿ ಅಕ್ರಮ ಸಂಬಂಧ: ಪತಿ ಆತ್ಮಹತ್ಯೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಪತ್ನಿಯ ಅಕ್ರಮ ಸಂಬಂಧವನ್ನು ಕಣ್ಣಾರೆ ಕಂಡ ಪತಿ ಜಿಗುಪ್ಸೆಗೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ.

ಅರಕಲಗೂಡು ತಾಲ್ಲೂಕು ಮುದ್ದನಹಳ್ಳಿ ಗ್ರಾಮದ ಇಂದ್ರೇಶ ಮೃತ ದುರ್ದೈವಿ.

ತಾಲ್ಲೂಕಿನ ಕೆರಗೋಡು ಗ್ರಾಮದ ಪತ್ನಿ ಮನೆಯಲ್ಲೇ ಕೊಟ್ಟಿಗೆಯಲ್ಲಿ ನೇಣು ಬಿಗಿದುಕೊಂಡಿದ್ದಾನೆ.

ಕೆರಗೋಡಿನ ಸುನೀತಾ ಅವರ ಜೊತೆಗೆ 12 ವರ್ಷದ ಹಿಂದೆ ವಿವಾಹವಾಗಿದ್ದ ಇಂದ್ರೇಶ್‌ಗೆ ಪುತ್ರಿ ಇದ್ದಾಳೆ. ಬೆಂಗಳೂರಿನಲ್ಲಿ ಕಾರು ಚಾಲಕನಾಗಿದ್ದ ಇಂದ್ರೇಶ ಕೆರಗೋಡಿನ ಹೆಂಡತಿ ತವರು ಮನೆಯಲ್ಲೇ ವಾಸವಿದ್ದ.

ಆದರೆ ಇತ್ತೀಚೆಗೆ ಪತ್ನಿ ಬೇರೆಯವನ ಜೊತೆ ಅಕ್ರಮ ಸಂಬಂಧ ಹೊಂದಿರುವ ವಿಚಾರ ಗೊತ್ತಾಗಿ ಈ ಸಂಬಂಧ ಜಗಳ ಮಾಡಿದ್ದ. ಗ್ರಾಮಸ್ಥರು ರಾಜಿ ಸಂಧಾನ ಮಾಡಿ ಸುನೀತಾಗೆ ಬುದ್ದಿವಾದ ಹೇಳಿದ್ದರು ಎಂದು ತಿಳಿದುಬಂದಿದೆ.

ಮೇ 24 ರಂದು ಅದೇ ಗ್ರಾಮದ ಕೆ.ಆರ್. ಪೇಟೆ ತಾಲ್ಲೂಕು ಯಾಲಾದಳ್ಳಿ ಗ್ರಾಮದ ಕಿರಣ್ ಎಂಬಾತನ ಜೊತೆ ಒಂದೇ ರೂಮ್‌ನಲ್ಲಿ ಸುನೀತಾ ಇದ್ದುದನ್ನು ಕಂಡ ಇಂದ್ರೇಶ್ ಮಾನಸಿಕವಾಗಿ ಕುಗ್ಗಿದ್ದ ಎನ್ನಲಾಗಿದೆ. ಆ ದಿನ ಹೆಂಡತಿ ಜೊತೆಗೆ ಜಗಳ ಮಾಡಿದ್ದ ಇಂದ್ರೇಶನು ಮೇ 28 ರಂದು ಮನೆಯ ಕೊಟ್ಟಿಗೆಯಲ್ಲಿ ನೇಣಿಗೆ ಶರಣಾಗಿದ್ದಾನೆ. ಪತ್ನಿಯ ಅಕ್ರಮ ಸಂಬಂಧಕ್ಕೆ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಮೃತನ ತಾಯಿ ಆರೋಪಿಸಿದ್ದಾರೆ.

ಹಳ್ಳಿಮೈಸೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248